KARNATAK UNIVERSITY, DHARWAD
ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ
Examination G.A.D. Section
ಪರೀಕ್ಷಾ ಸಾಮಾನ್ಯ ಆಡಳಿತ ವಿಭಾಗ
"NAAC Accredited with "A" Grade 2022"

Pavate Nagar, Dharwad
ಪಾವಟೆನಗರ, ಧಾರವಾಡ

Tel Ph No. 0836-2215267
Website : www.kud.ac.in

ನಂ:/ಕವಿವಿ/ಪರೀಕ್ಷಾ/ಜಿಎಡಿ/2026/ 1077

ದಿನಾಂಕ: 19-11-2026

ಸುತ್ತೋಲೆ

ವಿಷಯ: ನವೆಂಬರ್/ಡಿಸೆಂಬರ್ 2026 ರಲ್ಲಿ ಜರಗುವ ಎಲ್ಲ ಸ್ನಾತಕ ಪದವಿಯ 1, 3 5 & 7 ನೇ ಸೆಮಿಸ್ಟರ್ NEP ಹಾಗೂ Revised NEP ಲಿಖಿತ ಪರೀಕ್ಷೆಗಳ ಪ್ರವೇಶ ಪತ್ರಗಳಿಗೆ (Hall Ticket) ಸಂಬಂಧಿಸಿದಂತೆ ಪಾಲಿಸಬೇಕಾದ ಕ್ರಮಗಳ ಕುರಿತು.

ಉಲ್ಲೇಖ: ಪರಿಷ್ಕೃತ ವೇಳಾಪಟ್ಟಿ ನಂ:/ಕವಿವಿ/ಪರೀಕ್ಷಾ/ಜಿಎಡಿ/2026/1076, ದಿನಾಂಕ:19/11/2026

ಕ.ವಿ.ವಿ. ವ್ಯಾಪ್ತಿಯ ಎಲ್ಲ ಆಧೀನ ಹಾಗೂ ಸಂಲಗ್ನ ಮಹಾವಿದ್ಯಾಲಯಗಳ ಪ್ರಾಚಾರ್ಯರುಗಳಿಗೆ ಈ ಮೂಲಕ ತಿಳಿಸುವುದೆನೆಂದರೆ, ನವೆಂಬರ್/ಡಿಸೆಂಬರ್ 2026 ರಲ್ಲಿ ಜರಗುವ ಸ್ನಾತಕ ಪದವಿಯ 1, 3, 5 & 7 ನೇ ಸೆಮಿಸ್ಟರ್ NEP ಹಾಗೂ Revised NEP 1, 3 & 5 ನೇ ಸೆಮಿಸ್ಟರ್ (ರೆಗ್ಯೂಲರ್/ರಿಪೀಟರ್ಸ್) ವಿದ್ಯಾರ್ಥಿಗಳಿಗೆ ಲಿಖಿತ ಪರೀಕ್ಷೆಗಳು ದಿನಾಂಕ:24/11/2026 ರಿಂದ ಪ್ರಾರಂಭವಾಗಲಿವೆ. ಸದರಿ ಪರೀಕ್ಷೆಗಳಿಗೆ ಸಂಬಂಧಿಸಿದಂತೆ, ಪ್ರವೇಶ ಪತ್ರಗಳ ದಿನಾಂಕ ಮತ್ತು ವೇಳೆಯ ಮಾಹಿತಿಯನ್ನು ವೇಳಾಪಟ್ಟಿಯನುಸಾರ ಯು.ಯ.ಸಿ.ಎಂ.ಎಸ್. ತಂತ್ರಾಂಶದಲ್ಲಿ ಅಳವಡಿಸಲಾಗಿದೆ. ಮುಂದುವರೆದು, **ಎಲ್ಲ ಪ್ರಾಚಾರ್ಯರುಗಳು ಸದರಿ ಪ್ರವೇಶ ಪತ್ರಗಳನ್ನು ಮುದ್ರಿಸಿ (ರೆಗ್ಯೂಲರ್/ರಿಪೀಟರ್ಸ್) ವಿದ್ಯಾರ್ಥಿಗಳಿಗೆ ವಿತರಿಸುವ ಪೂರ್ವದಲ್ಲಿ ಪ್ರವೇಶ ಪತ್ರದಲ್ಲಿನ ವಿಷಯವಾರು ದಿನಾಂಕ ಮತ್ತು ವೇಳೆ ಪರಿಷ್ಕೃತ ವೇಳಾಪಟ್ಟಿಯನುಸಾರ ಸರಿಯಾಗಿ ನಮೂದಾಗಿರುವುದನ್ನು ಪರಿಶೀಲಿಸಿ ಖಚಿತಪಡಿಸಿಕೊಂಡು ಪ್ರವೇಶ ಪತ್ರಗಳನ್ನು ಮುದ್ರಿಸಿ (ರೆಗ್ಯೂಲರ್/ರಿಪೀಟರ್ಸ್) ವಿದ್ಯಾರ್ಥಿಗಳಿಗೆ ವಿತರಿಸಬೇಕು.**

ಒಂದು ವೇಳೆ ಪ್ರವೇಶ ಪತ್ರದಲ್ಲಿರುವ ಮಾಹಿತಿ ಹಾಗೂ ಪರಿಷ್ಕೃತ ವೇಳಾಪಪಟ್ಟಿ ಇವುಗಳ ಮಧ್ಯ ವ್ಯತ್ಯಾಸ ಕಂಡು ಬಂದಲ್ಲಿ ತಕ್ಷಣ ಅಧೀಕ್ಷಕರು, ಸಾಮಾನ್ಯ ಆಡಳಿತ ಶಾಖೆ ಪರೀಕ್ಷಾ ವಿಭಾಗ ಇವರಿಗೆ ತಿಳಿಸುವಂತೆ ಈ ಮೂಲಕ ಸೂಚಿಸಲಾಗಿದೆ. ತಪ್ಪಿದ್ದಲ್ಲಿ ಸಂಬಂಧಪಟ್ಟ ಮಹಾವಿದ್ಯಾಲಯದ ನೇರ ಹೊಣೆಗಾರನ್ನಾಗಿ ಮಾಡಲಾಗುವುದು.

19/11/26

ಕುಲಸಚಿವರು(ಮೌಲ್ಯಮಾಪನ)

ಗೆ,

ಕರ್ನಾಟಕ ವಿಶ್ವವಿದ್ಯಾಲಯ ವ್ಯಾಪ್ತಿಯ ಎಲ್ಲ ಸಂಲಗ್ನ ಹಾಗೂ ಅಧೀನ ಮಹಾವಿದ್ಯಾಲಯಗಳ ಪ್ರಾಚಾರ್ಯರುಗಳು.

ಪ್ರತಿಗಳು ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ:

1) ಸಿಸ್ಟಮ್ ಎನಾಲಿಸ್ಟ್, ಪರೀಕ್ಷಾ ಗಣಕಯಂತ್ರ ವಿಭಾಗ, ಕ.ವಿ.ವಿ. ಧಾರವಾಡ
2) ನಿರ್ದೇಶಕರು ಮಾಹಿತಿ ತಂತ್ರಜ್ಞಾನ ವಿಭಾಗ ಕ.ವಿ.ವಿ. ಧಾರವಾಡ. (ಅಧಿಸೂಚನೆಯನ್ನು ಅಂತರ್ಜಾಲದಲ್ಲಿ ಪ್ರಕಟಿಸುವುದು)
3) ಆಪ್ತಕಾರ್ಯದರ್ಶಿಗಳು, ಕುಲಪತಿಗಳು/ಕುಲಸಚಿವರು/ಕುಲಸಚಿವರು(ಮೌಲ್ಯಮಾಪನ)/ವಿತ್ತಾಧಿಕಾರಿಗಳು, ಕವಿವಿ, ಧಾರವಾಡ.
4) ಉಪಕುಲಸಚಿವರು / ಸಹಾಯಕ ಕುಲಸಚಿವರು, ಪರೀಕ್ಷಾ ವಿಭಾಗ, ಕ ವಿ ವಿ, ಧಾರವಾಡ.
5) ಅಧೀಕ್ಷಕರು, ಗೌಪ್ಯ/ಪ್ರಶ್ನೆಪತ್ರಿಕೆ/ಬಿ.ಎ./ಬಿ.ಕಾಂ./ಬಿ.ಎಸ್.ಸಿ./ಕಾನೂನು/ಘಟಿಕೋತ್ಸವ ಪರೀಕ್ಷಾ ವಿಭಾಗ, ಕವಿವಿ, ಧಾರವಾಡ.